# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 557
ಸದಸ್ಯರ ಹೆಸರು : ಶ್ರೀ ರಾಜೇಂದ್ರ ರಾಜಣ್ಣ
ಉತ್ತರಿಸುವ ದಿನಾಂಕ : 20/02/2024
ಉತ್ತರಿಸುವ ಸಚಿವರು : ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು.

| ಪ್ರಶ್ನೆ | | ಉತ್ತರ |
|---|---|---|
| ಅ) | ತುಮಕೂರು ನಗರವು ಅತ್ಯಂತ ವೇಗವಾಗಿ ಬೆಳೆಯುತ್ತಿರುವ ನಗರವಾಗಿದ್ದು, ತುಮಕೂರು ಮಹಾನಗರ ಪಾಲಿಕೆಯ ವ್ಯಾಪ್ತಿಯನ್ನು ವಿಸ್ತರಣೆ ಮಾಡುವ ಪ್ರಸ್ತಾವನೆಯು ಸರ್ಕಾರರದ ಮುಂದಿದೆಯೇ; | ಒಂದು ಗ್ರಾಮ ಪಂಚಾಯಿತಿ ಇಲ್ಲವೇ ಒಂದು ನಗರ ಸ್ಥಳೀಯ ಸಂಸ್ಥೆಯನ್ನು ಮಹಾನಗರ ಪಾಲಿಕೆಯನ್ನಾಗಿ ಪರಿವರ್ತಿಸಲು ಅಥವಾ ಮೇಲ್ದರ್ಜೆಗೇರಿಸಲು ಇಲ್ಲವೇ ಮಹಾನಗರ ಪಾಲಿಕೆಯ ವ್ಯಾಪ್ತಿಗೆ ಸೇರ್ಪಡೆಗೊಳಿಸಬೇಕಾಗಿದ್ದಲ್ಲಿ, ನಿಕಟಪೂರ್ವ ಜನಗಣತಿಯ ಮಾಹಿತಿಯನ್ವಯ, ಅಂತಹ ಒಟ್ಟಾರೆ ಪ್ರದೇಶದಲ್ಲಿ ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರ ಸೆಕ್ಷನ್–3 ರಲ್ಲಿರುವಂತೆ ಮೂರು ಲಕ್ಷಕ್ಕಿಂತ ಹೆಚ್ಚು ಜನಸಂಖ್ಯೆ, ಪ್ರತೀ ಚದರ ಕಿಲೋಮೀಟರ್ ಪ್ರದೇಶಕ್ಕೆ ಮೂರು ಸಾವಿರ ನಿವಾಸಿಗಳಿಗಿಂತ ಹೆಚ್ಚಿನ ಜನಸಾಂದ್ರತೆ, ಅಂಥ ಪ್ರದೇಶದಲ್ಲಿನ ವಾರ್ಷಿಕ ಆದಾಯವು ರೂ.6.00 ಲಕ್ಷಕ್ಕಿಂತ ಕಡಿಮೆಯಿಲ್ಲದಂತೆ ಅಥವಾ ಅಂಥ ಪ್ರದೇಶದಲ್ಲಿನ ನಿವಾಸಿಗಳ ವಾರ್ಷಿಕ ತಲಾದಾಯ ರೂ.200/– ಕ್ಕಿಂತ ಕಡಿಮೆಯಿಲ್ಲದಂತಿರಬೇಕು ಹಾಗೂ ಅಂಥ ಪ್ರದೇಶದಲ್ಲಿ 50% ಕ್ಕಿಂತ ಹೆಚ್ಚು ಜನರು ಕೃಷಿಯೇತರ ಚಟುವಟಿಕೆಗಳಲ್ಲಿರಬೇಕಾಗುತ್ತದೆ.<br><br>ಪ್ರಸ್ತುತ, ಆಯುಕ್ತರು, ತುಮಕೂರು ಮಹಾನಗರ ಪಾಲಿಕೆ ರವರು ದಿನಾಂಕ:05/02/2024 ರಂದು ಸರ್ಕಾರಕ್ಕೆ ಪತ್ರವನ್ನು ಸಲ್ಲಿಸಿದ್ದು, ತುಮಕೂರು ಮಹಾನಗರಪಾಲಿಕೆಯ ಭೌಗೋಳಿಕ ವ್ಯಾಪ್ತಿಯನ್ನು ವಿಸ್ತರಿಸುವ ಕುರಿತಂತೆ ಮಾಹಿತಿಗಳನ್ನು ಸಂಗ್ರಹಿಸಲು ಹಾಗೂ ಸ್ಥಳ ಪರಿಶೀಲಿಸಿ ವರದಿ ನೀಡಲು ಉಪ ಆಯುಕ್ತರು (ಕಂದಾಯ), ಉಪ ಆಯುಕ್ತರು (ಅಭಿವೃದ್ಧಿ) ಹಾಗೂ ಸರ್ವೇ ಶಾಖೆಯವರಿಗೆ ಆದೇಶ ನೀಡಲಾಗಿದ್ದು, ಅಲ್ಲಿನ ಕಚೇರಿಯ ಸರ್ವೇ ಶಾಖೆಯಿಂದ ಸಭೆ ನಡೆಸಿ, ನಕ್ಷೆ, ಜನಸಂಖ್ಯೆ ಹಾಗೂ ಜನಸಾಂದ್ರತೆ ವಿವರ, ತುಮಕೂರು |
| ಆ) | ಇದ್ದಲ್ಲಿ, ತುಮಕೂರು ಮಹಾನಗರ ಪಾಲಿಕೆ ವ್ಯಾಪ್ತಿಯನ್ನು ವಿಸ್ತರಣೆ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು? | |

| | | |
|---|---|---|
| | | ಮಹಾನಗರಪಾಲಿಕೆ ವ್ಯಾಪ್ತಿಯ ಗಡಿಗೆ ಹೊಂದಿಕೊಂಡಿರುವ ಅಭಿವೃದ್ಧಿ ಹೊಂದಿದ ಗ್ರಾಮಗಳ ವಿವರ, ಆಡಳಿತಕ್ಕಾಗಿ ಉತ್ಪತ್ತಿಯಾಗುವ ಆದಾಯದ ವಿವರ, ಕೃಷಿಯೇತರ ಚಟುವಟಿಕೆಗಳಲ್ಲಿ ತೊಡಗಿರುವ ಉದ್ಯೋಗಿಗಳ ಶೇಕಡಾವಾರು ವಿವರ, ಆರ್ಥಿಕ ಪ್ರಾಮುಖ್ಯತೆ ವಿವರ ಮತ್ತು ಇತರ ಅವಶ್ಯಕ ವಾಸ್ತವಿಕ ಅಂಕಿ–ಅಂಶಗಳನ್ನು ಸಂಗ್ರಹಿಸಲು ಉಪ ಆಯುಕ್ತರು (ಕಂದಾಯ), ಉಪ ಆಯುಕ್ತರು (ಅಭಿವೃದ್ಧಿ), ಸರ್ವೇ ಶಾಖೆಯವರಿಗೆ, ಅಲ್ಲದೇ ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದವರಿಗೂ ಸಹ ನಕ್ಷೆಯನ್ನು ತಯಾರಿಸಲು ಸಭೆಯಲ್ಲಿ ಸೂಚನೆ ನೀಡಲಾಗಿರುತ್ತದೆ ಎಂದು ಮಾಹಿತಿಯನ್ನು ನೀಡಿರುತ್ತಾರೆ ಹಾಗೂ ತುಮಕೂರು ಮಹಾನಗರ ಪಾಲಿಕೆಯ ಭೌಗೋಳಿಕ ವ್ಯಾಪ್ತಿಯನ್ನು ವಿಸ್ತರಿಸಲು ಪ್ರಸ್ತಾವನೆಯನ್ನು ಸಲ್ಲಿಸಲಾಗುವುದೆಂದು ತಿಳಿರುತ್ತಾರೆ. ಆದ್ದರಿಂದ, ತುಮಕೂರು ಮಹಾನಗರ ಪಾಲಿಕೆಯ ವ್ಯಾಪ್ತಿಗೆ ಕೆಲವು ಪ್ರದೇಶಗಳನ್ನು ಸೇರ್ಪಡೆಗೊಳಿಸಿ, ಪಾಲಿಕೆಯ ವ್ಯಾಪ್ತಿಯನ್ನು ವಿಸ್ತರಿಸುವುದಕ್ಕಾಗಿ ಕರ್ನಾಟಕ ಮಹಾನಗರ ಪಾಲಿಕೆಗಳ ಅಧಿನಿಯಮ 1976 ರನ್ವಯ ನಿಯಮಾನುಸಾರ ಪರಿಶೀಲಿಸಿ, ಸೂಕ್ತ ಅನುಬಂಧಗಳಲ್ಲಿ ಮಾಹಿತಿ, ಶೆಡ್ಯೂಲ್‌ಗಳು, ಸಭಾ ಠರಾವು, ನಕ್ಷೆ ಮತ್ತಿತರ ಅಗತ್ಯ ದಾಖಲೆಗಳೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಕೋರಿ ದಿನಾಂಕ:07/02/2024 ರಂದು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರಿಗೆ ಸರ್ಕಾರದಿಂದ ಪತ್ರವನ್ನು ಬರೆಯಲಾಗಿರುತ್ತದೆ. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರಿಂದ ನಿಯಮಾನುಸಾರ ಅರ್ಹವಾದ ಪೂರ್ಣ ಪ್ರಮಾಣದ ಪ್ರಸ್ತಾವನೆಯು ಸರ್ಕಾರದಲ್ಲಿ ಸ್ವೀಕೃತವಾದಲ್ಲಿ ನಿಯಮಾನುಸಾರ ಪರಿಶೀಲಿಸಿ, ಅಗತ್ಯ ಕ್ರಮವಹಿಸಲಾಗುತ್ತದೆ. |

**ಸಂಖ್ಯೆ:ನಅಇ 07 ಎಲ್‌ಸಿಕ್ಯೂ 2024.**

21/02/2024

**(ಬಿ ಎಸ್ ಸುರೇಶ್)**

**ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು**